**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು**

ದಿನಾಂಕಃ 22ನೇ ಏಪ್ರಿಲ್ ತಿಂಗಳು 2026ರಂದು

**ಸಿಸಿ ನಂ.947/2025**

**ಫಿರ್ಯಾದುದಾರರುಃ** ಶ್ರೀ.ಮಧು, ಬಿನ್ ಚಂದ್ರಹಾಸಗೌಡ,
32 ವರ್ಷ, ವಾಸಃ ಮೂಡಲಕೊಪ್ಪಲು ಗ್ರಾಮ ,
ಕಸಬಾ ಹೋಬಳಿ, ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

**– ವಿರುದ್ಧ –**

**ಆರೋಪಿಃ** ಶ್ರೀ.ಹೆಚ್.ಕೆ.ಅರ್ಜುನ್, ಬಿನ್ ಕೆಂಚನಾಯಕ,
35 ವರ್ಷ, ವಾಸಃ ಹಂಡನಹಳ್ಳಿ ಗ್ರಾಮ,
ಬಿಳಿಕೆರೆ ಹೋಬಳಿ, ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

**ಭಾರತೀಯ ನಾಗರೀಕಾ ಸುರಕ್ಷಾ ಸಂಹಿತೆಯ ಕಲಂ 351 ರ ಅಡಿಯಲ್ಲಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1: | ಫಿರ್ಯಾದುದಾರರಾದ ಮಧುರವರು ನಿಮ್ಮ ವಿರುದ್ಧ ಕೊಟ್ಟಿರುವ ಹೇಳಿಕೆಗಳನ್ನು ಕೇಳಿದ್ದೀರಾ? |
| ಉತ್ತರ: | ತಿಳಿದಿದೆ |
| ಪ್ರಶ್ನೆ 2: | ಪಿ.ಡಬ್ಲ್ಯು–1 ಮಧುರವರು ತಮ್ಮ ಸಾಕ್ಷ್ಯದಲ್ಲಿ, ನೀವು ಮತ್ತು ಅವರು ಹಲವಾರು ವರ್ಷಗಳಿಂದ ಪರಿಚಿತರಾಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 3: | ಇದೇ ಸಾಕ್ಷಿಯು ಮುಂದುವರಿದು ತಮ್ಮ ಸಾಕ್ಷ್ಯದಲ್ಲಿ, ಸದರಿ ಪರಿಚಯದ ಆಧಾರದ ಮೇಲೆ ಜನವರಿ – 2025 ಕೊನೆಯ ವಾರದಲ್ಲಿ ನೀವು ನಿಮ್ಮ ದರದ್ದು ನಿಮಿತ್ತ ಅಂದರೆ ಕೈ ಸಾಲ, ಕೃಷಿ ಸಾಲ ಮತ್ತು ಮನೆ ಸಾಲಗಳನ್ನು ತೀರಿಸಲು ಅವರಿಂದ ರೂ.2,50,000/–ಗಳನ್ನು ಆರು ತಿಂಗಳ ಒಳಗೆ ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |

| | |
|---|---|
| ಉತ್ತರ: | ಸುಳ್ಳು |
| ಪ್ರಶ್ನೆ 4: | ಇದೇ ಸಾಕ್ಷಿಯು ಮುಂದುವರಿದು ತಮ್ಮ ಸಾಕ್ಷ್ಯದಲ್ಲಿ, ಸದರಿ ಸಾಲದ ಮರುಪಾವತಿಯ ಸಲುವಾಗಿ 01.07.2025 ರ ದಿನಾಂಕ ನಮೂದಿಸಿ ಇಸಾಫ್ ಸಣ್ಣ ಹಣಕಾಸು ಬ್ಯಾಂಕ್, ಹುಣಸೂರು ಶಾಖೆಯ ಚೆಕ್ ಸಂಖ್ಯೆ: 925294 ಅನ್ನು ರೂ.2,50,000/-ಗಳಿಗೆ ಫಿರ್ಯಾದಿದಾರರಿಗೆ ನೀಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 5: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನೀವು ನೀಡಿದ ಚೆಕ್ ಅನ್ನು ಅವರು ತಮ್ಮ ಬ್ಯಾಂಕ್ ಆದ ಕರ್ನಾಟಕ ಬ್ಯಾಂಕ್, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ" ಎಂಬ ಕಾರಣಕ್ಕಾಗಿ ದಿನಾಂಕಃ 02.07.2025ರ ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 6: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಈ ಬಗ್ಗೆ ಅವರು ತಮ್ಮ ವಕೀಲರ ಮೂಲಕ ನಿಮಗೆ ದಿನಾಂಕಃ 08.07.2025ರಂದು ರಂದು ನೋಟೀಸನ್ನು ನೀಡಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 7: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ನೋಟೀಸು ನಿಮಗೆ ದಿನಾಂಕಃ 15.07.2025ರಂದು ಖುದ್ದಾಗಿ ಜಾರಿಯಾಗಿರುತ್ತದೆ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 8: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆದರೂ ಸಹ ನೀವು ಉದ್ದೇಶಪೂರ್ವಕವಾಗಿ ಚೆಕ್ಕಿನಲ್ಲಿ ನಮೂದಿಸಿದ ಹಣವನ್ನು ಮರುಪಾವತಿಸದೇ ಇರುವ ಕಾರಣ ನೀವು ನೆಗೋಶಿಯೇಬಲ್ ಇನ್ಸ್ಟ್ರುಮೆಂಟ್ಸ್ ಕಾಯಿದೆಯ ಕಲಂ 138ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 9: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನೀವು ಅವರಿಗೆ ನೀಡಿದ ಚೆಕ್, ಬ್ಯಾಂಕಿನವರು ನೀಡಿದ ಹಿಂಬರಹಗಳು, ವಕೀಲರ ಮೂಲಕ ನೀಡಿದ ನೋಟೀಸಿನ ಕಚೇರಿ ಪ್ರತಿ, ಅಂಚೆ ರಶೀದಿ ಮತ್ತು ಅಂಚೆ ಸ್ವೀಕೃತಿ ಪತ್ರವನ್ನು ಹಾಜರುಪಡಿಸಿ ನಿಪಿ-1 ರಿಂದ ನಿಪಿ-6 ಎಂದು ಗುರುತಿಸಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 10: | ನಿಮಗೆ ಈ ಕೇಸಿನ ಬಗ್ಗೆ ಮತ್ತೆ ಏನಾದರೂ ಹೇಳುವುದು ಇದೆಯೇ? |
| ಉತ್ತರ: | ಇಲ್ಲ |
| ಪ್ರಶ್ನೆ 11: | ನಿಮ್ಮ ಪರವಾಗಿ ಸಾಕ್ಷಿ ವಿಚಾರಣೆ ಇದೆಯೇ? |
| ಉತ್ತರ: | ಇಲ್ಲ |

ಈ ಮೇಲ್ಕಂಡ ಹೇಳಿಕೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಮತ್ತು ಸರಿಯಾಗಿದೆಯೆಂದು ದೃಢೀಕರಿಸಿರುತ್ತೇನೆ.

ದಿನಾಂಕಃ 22.04.2026.

ANITHA

Digitally signed by ANITHA
Date: 2026.04.22 18:11:07 +0530

Sd/-

**(ಅನಿತ)**

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ., ಹುಣಸೂರು .

ಆರೋಪಿಯ ಸಹಿಃ